# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಹೊಸದಾಗಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡಿದ್ದು, ಅವುಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸಲು ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 260 ವೆಚ್ಚ-6/2015, ದಿನಾಂಕ:04.08.2015.
2. ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 133 ಗ್ರಾನೀಸ(4) 2015, ದಿನಾಂಕ:14.08.2015.
3. ಜಿಲ್ಲಾ ಪಂಚಾಯತ್‌ಗಳಿಂದ ಸ್ವೀಕೃತಗೊಂಡಿರುವ ಪ್ರಸ್ತಾವನೆಗಳು.

**ಪೀಠಿಕೆ:**

ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಹೊಸದಾಗಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡಿದ್ದು, ಅವುಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸಲು ಅನುದಾನ ಬಿಡುಗಡೆ ಮಾಡಬೇಕೆಂದು ಹಲವಾರು ಎಸ್ಕಾಂಗಳಿಂದ ಬೇಡಿಕೆಗಳು ಜಿಲ್ಲಾ ಪಂಚಾಯತ್‌ಗೆ ಸಲ್ಲಿಕೆಯಾಗಿರುತ್ತವೆ. ದಿನಾಂಕ: 30.07.2015ರಂದು ಮಾನ್ಯ ಮುಖ್ಯ ಕಾರ್ಯದರ್ಶಿಗಳ ಅಧ್ಯಕ್ಷತೆಯಲ್ಲಿ ನಡೆದ ಅಧಿಕಾರಿಗಳ ಸಭೆಯಲ್ಲಿ ಈ ಬಿಲ್ಲುಗಳನ್ನು ಪಾವತಿಸಲು ತುರ್ತಾಗಿ **ರೂ.50.00ಕೋಟಿ**ಗಳನ್ನು ಎಸ್ಕಾಂಗಳಿಗೆ ಪಾವತಿಸಲು ತೀರ್ಮಾನಿಸಲಾಗಿರುತ್ತದೆ. ಈ ಹಿನ್ನೆಲೆಯಲ್ಲಿ ವಿದ್ಯುತ್ ಸಂಪರ್ಕ ಕಲ್ಪಿಸಲು ಕಾಮಗಾರಿಗಳ ಬಿಲ್ ಪಾವತಿಗಾಗಿ ಅನುದಾನ ಬಿಡುಗಡೆ ಮಾಡಲು ಮೇಲೆ (1)ರಲ್ಲಿ ಓದಲಾದ ಆರ್ಥಿಕ ಇಲಾಖೆಯ ಟಿಪ್ಪಣಿಯಲ್ಲಿ **2015-16ನೇ** ಸಾಲಿನ ಆಯವ್ಯಯದಲ್ಲಿ **ಲೆಕ್ಕ ಶೀರ್ಷಿಕೆ:2215-01-102-9-08-132** ಬಂಡವಾಳ ವೆಚ್ಚಗಳಡಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಅನುಷ್ಠಾನಗೊಳಿಸಿರುವ ಕುಡಿಯುವ ನೀರಿನ ಯೋಜನೆಗಳ ವಿದ್ಯುತ್ ಸಂಪರ್ಕ ಕಲ್ಪಿಸಿರುವ ಕಾಮಗಾರಿಗಳಿಗಾಗಿ **ರೂ.50.00ಕೋಟಿ**ಗಳನ್ನು ಎಸ್ಕಾಂಗಳಿಗೆ ಪಾವತಿಸಲು ಅನುದಾನ ಬಿಡುಗಡೆ ಮಾಡಲು ಆರ್ಥಿಕ ಇಲಾಖೆಯಿಂದ ಸಹಮತಿ ದೊರೆತಿದ್ದು, ಅದರಂತೆ **ರೂ.25.00ಕೋಟಿ** ಅನುದಾನವನ್ನು ಉಲ್ಲೇಖ (2)ರ ಸರ್ಕಾರದ ಆದೇಶದಲ್ಲಿ ಬಿಡುಗಡೆ ಮಾಡಲಾಗಿರುತ್ತದೆ. ಉಲ್ಲೇಖ (3)ರಲ್ಲಿನ ಪ್ರಸ್ತಾವನೆಯಂತೆ ಹಾಲಿ **14** ಜಿಲ್ಲೆಗಳಲ್ಲಿ ಹೊಸದಾಗಿ ಕುಡಿಯುವ ನೀರಿನ ಯೋಜನೆಗಳನ್ನು ಅನುಷ್ಠಾನ ಮಾಡಿದ್ದು, ಅವುಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿಗಳ ಬಿಲ್ಲುಗಳನ್ನು ಪಾವತಿಸಲು **ರೂ.21.69ಕೋಟಿ (ಇಪ್ಪತ್ತೊಂದು ಕೋಟಿ ಅರವತ್ತೊಂಬತ್ತು ಲಕ್ಷ ಮಾತ್ರ)**ಅನುದಾನವನ್ನು ಬಿಡುಗಡೆ ಮಾಡಲು ನಿರ್ಧರಿಸಲಾಗಿದೆ. ಆದ್ದರಿಂದ ಈ ಆದೇಶ.

## ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 133 ಗ್ರಾನೀಸ(4)2015, ದಿನಾಂಕ:27.08.2015.

ಪೀಠಿಕೆಯಲ್ಲಿನ ಪ್ರಸ್ತಾವನೆ ಕುರಿತು ಪರಿಶೀಲಿಸಿ, **2015-16ನೇ** ಸಾಲಿನ ಆಯವ್ಯಯದಲ್ಲಿ **ಲೆಕ್ಕ ಶೀರ್ಷಿಕೆ:2215-01-102-9-08-132** ಬಂಡವಾಳ ವೆಚ್ಚಗಳಡಿ ರಾಜ್ಯದ ಗ್ರಾಮೀಣ ಪ್ರದೇಶಗಳಲ್ಲಿ ಹೊಸದಾಗಿ ಅನುಷ್ಠಾನಗೊಳಿಸಿರುವ ಕುಡಿಯುವ ನೀರಿನ ಯೋಜನೆಗಳ ವಿದ್ಯುತ್ ಸಂಪರ್ಕ ಕಲ್ಪಿಸುವ ಕಾಮಗಾರಿಗಳಿಗಾಗಿ ಈ ಕೆಳಕಂಡ ಜಿಲ್ಲೆಗಳಿಗೆ ಎದುರಾಗಿ ನಮೂದಿಸಲಾಗಿರುವಂತೆ ಅನುದಾನವನ್ನು ಎಸ್ಕಾಂಗಳಿಗೆ ಪಾವತಿಸಲು ಒಟ್ಟಾರೆ **ರೂ.21.69ಕೋಟಿ (ಇಪ್ಪತ್ತೊಂದು ಕೋಟಿ ಅರವತ್ತೊಂಬತ್ತು ಲಕ್ಷ ಮಾತ್ರ)** ಅನುದಾನವನ್ನು ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

| ಕ್ರ.ಸಂ | ಜಿಲ್ಲೆ | ಶೇವಣಿ ಬಾಬ್ತು ಬಿಲ್ಲಗಳು | ಬಿಡುಗಡೆ ಮಾಡಲಾದ ಅನುದಾನ (ರೂ. ಲಕ್ಷಗಳಲ್ಲಿ) |
|---|---|---|---|
| 1 | ಬಾಗಲಕೋಟ | 31 | 40.45 |
| 2 | ಬೀದರ್ | 81 | 18.48 |
| 3 | ಬಿಜಾಪುರ | 69 | 113.20 |
| 4 | ಧಾರವಾಡ | 19 | 54.53 |
| 5 | ಕೊಪ್ಪಳ | 46 | 165.54 |
| 6 | ಹಾವೇರಿ | 129 | 306.06 |
| 7 | ಚಿಕ್ಕಮಗಳೂರು | 171 | 423.92 |
| 8 | ಬೆಂಗಳೂರು (ಗ್ರಾ) | 240 | 452.88 |
| 9 | ಕೋಲಾರ | 867 | 138.94 |
| 10 | ಬೆಂಗಳೂರು (ನ) | 80 | 73.98 |
| 11 | ಮಂಡ್ಯ | 205 | 249.41 |
| 12 | ಮೈಸೂರು | 11 | 11.65 |
| 13 | ಗದಗ | 66 | 23.96 |
| 14 | ಚಾಮರಾಜನಗರ | 98 | 96.07 |
| ಒಟ್ಟು | | | **2169.07** |

2. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಸಂಬಂಧಿಸಿದ ಎಸ್ಕಾಂಗಳಿಂದ ಸ್ವೀಕೃತಿಯಾಗಿರುವ ಬಿಲ್ಲುಗಳನ್ನು, ವಿದ್ಯುತ್ ಸಂಪರ್ಕ ಕಲ್ಪಿಸಿರುವ ಕಾಮಗಾರಿಗಳನ್ನು ಸಮಗ್ರವಾಗಿ ಪರಿಶೀಲಿಸಿ, ನಂತರ ಬಿಲ್ ಪಾವತಿಸಲು ಕ್ರಮವಹಿಸತಕ್ಕದ್ದು.

3. **CE/RDWSD** ಹಾಗೂ ಸಂಬಂಧಿಸಿದ ಜಿಲ್ಲೆಗಳ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಅಭಿಯಂತರರು ಯಾವುದೇ ಕಾರಣಕ್ಕೂ ಈ ಆದೇಶದಲ್ಲಿ ಬಿಡುಗಡೆ ಮಾಡಲಾಗಿರುವ ಅನುದಾನವನ್ನು ಇತರೆ ಯಾವುದೇ ಗ್ರಾಮೀಣ ನೀರು ಸರಬರಾಜು ಯೋಜನೆಗಳಡಿ ಈಗಾಗಲೇ ಪಾವತಿಸಿರುವ ಬಿಲ್‌ಗಳು ಪುನರಾವರ್ತನೆಯಾಗದಂತೆ ನೋಡಿಕೊಳ್ಳತಕ್ಕದ್ದು.

4. ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು **RTGS** ಮುಖೇನ ಈಗಾಗಲೇ ಗೊತ್ತುಪಡಿಸಿರುವ **RDWSD** ಬ್ಯಾಂಕ್ ಖಾತೆ ಸಂಖ್ಯೆ:**04462010091577**ನ ಮುಖೇನ ಮೇಲ್ಕಂಡಂತೆ ಅನುದಾನ ವಿನಿಯೋಗಿಸಬೇಕು. ಸದರಿ ಅನುದಾನ ಬಿಡುಗಡೆ ಹಾಗೂ ವಿನಿಯೋಗದ ಆರ್ಥಿಕ ಮತ್ತು ಭೌತಿಕ ಪ್ರಗತಿಯನ್ನು **2015-16**ರ ಸಾಲಿನ **IMIS**ನಲ್ಲಿ ಹಾಗೂ ಗಾಂಧಿ ಸಾಕ್ಷಿ ಕಾಯಕದಲ್ಲಿ ದಾಖಲಿಸಲು **CE/RDWSD** ಹಾಗೂ ಸಂಬಂಧಿಸಿದ ಜಿಲ್ಲೆಗಳ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳ ಕಾರ್ಯಪಾಲಕ ಅಭಿಯಂತರರು ಕ್ರಮವಹಿಸತಕ್ಕದ್ದು.

5. ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿ ಟಿಪ್ಪಣಿ ಸಂಖ್ಯೆ: ಆಇ 260 ವೆಚ್ಚ-6/2015, ದಿನಾಂಕ:04.08.2015ರ ಹಾಗೂ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಆಂತರಿಕ ಆರ್ಥಿಕ ಸಲಹೆಗಾರರು, ಯೋಜನೆಗಳ ಮುಂದುವರಿಕೆಗೆ ಹೊರಡಿಸಿರುವ ಆದೇಶ ಸಂಖ್ಯೆ:ಗ್ರಾಅಪ/253/ಎಎಫ್‌ಎನ್/2015, ದಿನಾಂಕ:01.04.2015ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಬಿ. ಕೃಷ್ಣಪ್ಪ)
ಸರ್ಕಾರದ ಉಪಕಾರ್ಯದರ್ಶಿ(ಗ್ರಾನೀಸ),
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
ಫೋನ್ & ಫ್ಯಾಕ್ಸ್: 080- 22233175

**ಪ್ರತಿಗಳು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು (ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು (ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು, ಮಹಾಲೇಖಪಾಲರು(ಎಯು-1)ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
7. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು-1.
8. ವಿಶೇಷಾಧಿಕಾರಿಗಳು(ಜಿಪಂ)ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
9. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ (6) (ಜಿಪಂ) ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು-1.
10. ಮುಖ್ಯ ಇಂಜಿನಿಯರ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 1ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
11. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B Complex, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-09.
12. ಬಾಗಲಕೋಟೆ, ಬೀದರ್, ಬಿಜಾಪುರ, ಧಾರವಾಡ, ಕೊಪ್ಪಳ, ಹಾವೇರಿ, ಚಿಕ್ಕಮಗಳೂರು, ಬೆಂಗಳೂರು (ಗ್ರಾ), ಕೋಲಾರ, ಬೆಂಗಳೂರು(ನ), ಮೈಸೂರು, ಗದಗ, ಚಾಮರಾಜನಗರ ಮತ್ತು ಮಂಡ್ಯ ಜಿಲ್ಲಾ ಪಂಚಾಯಿತಿಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
13. ಕಾರ್ಯಪಾಲಕ ಅಭಿಯಂತರರು, ಕುಡಿಯುವ ನೀರು ಮತ್ತು ನೈರ್ಮಲ್ಯ ವಿಭಾಗಗಳು, ಬಾಗಲಕೋಟೆ, ಬೀದರ್, ಬಿಜಾಪುರ, ಧಾರವಾಡ, ಕೊಪ್ಪಳ, ಹಾವೇರಿ, ಚಿಕ್ಕಮಗಳೂರು, ಬೆಂಗಳೂರು (ಗ್ರಾ), ಕೋಲಾರ, ಬೆಂಗಳೂರು(ನ), ಮೈಸೂರು, ಗದಗ, ಚಾಮರಾಜನಗರ ಮತ್ತು ಮಂಡ್ಯ.
14. ಕಾರ್ಯಪಾಲಕ ಅಭಿಯಂತರರು, ಸಂಬಂಧಪಟ್ಟ ಎಸ್ಕಾಂಗಳು.
15. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ ಇಲಾಖೆ, ಬೆಂಗಳೂರು.
16. ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ನಂ.49, ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು.
17. ಜಿಲ್ಲಾ ಖಜಾನಾಧಿಕಾರಿಗಳು, ಬಾಗಲಕೋಟೆ, ಬೀದರ್, ಬಿಜಾಪುರ, ಧಾರವಾಡ, ಕೊಪ್ಪಳ, ಹಾವೇರಿ, ಚಿಕ್ಕಮಗಳೂರು, ಬೆಂಗಳೂರು (ಗ್ರಾ), ಕೋಲಾರ, ಬೆಂಗಳೂರು(ನ), ಮೈಸೂರು, ಗದಗ, ಚಾಮರಾಜನಗರ ಮತ್ತು ಮಂಡ್ಯ.
18. ನಿರ್ದೇಶಕರು, ಶ್ರೀ ಅಬ್ದುಲ್ ನಜೀರ್ ಸಾಬ್‌ರವರ ಗ್ರಾಮೀಣಾಭಿವೃದ್ಧಿ ರಾಜ್ಯ ಸಂಸ್ಥೆ, ಲಲಿತ್ ಮಹಲ್ ರಸ್ತೆ, ಮೈಸೂರು.
19. ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆಯ ಸರ್ಕಾರದ ಪ್ರಧಾನ ಕಾರ್ಯದರ್ಶಿ/ ಕಾರ್ಯದರ್ಶಿ (ಪಂ.ರಾಜ್) ಇವರ ಆಪ್ತ ಕಾರ್ಯದರ್ಶಿ.
20. ಆಯುಕ್ತರು ಮತ್ತು ಪದನಿಮಿತ್ತ ಸರ್ಕಾರದ ಅಪರ ಕಾರ್ಯದರ್ಶಿಗಳು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ, 2ನೇ ಮಹಡಿ, 'E' Block, K.H.B complex, ಕಾವೇರಿ ಭವನ, ಕೆ.ಜಿ ರಸ್ತೆ, ಬೆಂಗಳೂರು-560009ರವರ ಆಪ್ತ ಕಾರ್ಯದರ್ಶಿ.
21. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆರವರ ಆಪ್ತ ಸಹಾಯಕರು.
22. ಸಂಪಾದಕರು, ಕರ್ನಾಟಕ ವಿಕಾಸ, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ನಂ.309, 3ನೇ ಮಹಡಿ, ಗೇಟ್ ನಂ.1, ಬಹುಮಹಡಿಗಳ ಕಟ್ಟಡ, ಅಂಬೇಡ್ಕರ್ ವೀಧಿ, ಬೆಂಗಳೂರು-560001.
23. ಗ್ರಾ.ಅ.ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ-(10ಪ್ರತಿಗಳು).
24. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾಅಪಂರಾಜ್ ಇಲಾಖೆ(ವಾರದ ಗೆಜೆಟ್‌ನಲ್ಲಿ ಪ್ರಕಟಿಸಲು 5ಪ್ರತಿಗಳು)
25. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ).
26. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.